Akashvani: Bangalore

Regional Bulletin In Kannada

18.08.2025 : 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

18.08.2025 : 18.40 hrs

*******

## ಮುಖ್ಯಾಂಶಗಳು

೧. ಅಧಿವೇಶನ ಮುಗಿದ ಬಳಿಕ ಬಿಪಿಎಲ್ ಕಾರ್ಡ್ ಪರಿಷ್ಕರಿಸಲು ಸರ್ಕಾರ ನಿರ್ಧಾರ

೨. ಧರ್ಮಸ್ಥಳದಲ್ಲಿ ಶವ ಶೋಧ ಕಾರ್ಯ ತಾತ್ಕಾಲಿಕ ಸ್ಥಗಿತ - ಗೃಹ ಸಚಿವ ಡಾ. ಜಿ. ಪರಮೇಶ್ವರ್ ಘೋಷಣೆ

೩. ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ಸೇರಿದ ರಾಜ್ಯ ಸರ್ಕಾರದ ಪ್ರತಿಷ್ಠಿತ ಶಕ್ತಿ ಯೋಜನೆ

೪. ರಾಜ್ಯದ ಹಲವೆಡೆ ಧಾರಾಕಾರ ಮಳೆ; ಶಿರಾಡಿಘಾಟ್ ರಾಷ್ಟ್ರೀಯ ಹೆದ್ದಾರಿ ೭೫ ಸಂಚಾರಕ್ಕೆ ಮುಕ್ತ

><><><><><><><

ಅಧಿವೇಶನ ಮುಗಿದ ಬಳಿಕ ಬಿಪಿಎಲ್ ಪಡಿತರ ಕಾರ್ಡ್ ಪರಿಷ್ಕರಣೆಗೆ ಮುಂದಾಗುವುದಾಗಿ ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ. ಪರಿಷತ್ ನಲ್ಲಿಂದು ಉತ್ತರಿಸಿದ ಅವರು ಮಹಾರಾಷ್ಟ್ರ ಬಿಟ್ಟರೆ ನಮ್ಮ ರಾಜ್ಯ ಬಿಪಿಎಲ್‌ನಲ್ಲಿ ಎರಡನೇ ಸ್ಥಾನದಲ್ಲಿ ಇವೆ. ೩ ಲಕ್ಷ ೨೭ ಸಾವಿರ ಕಾರ್ಡ್ ಪರಿಶೀಲನೆ ನಡೆಸಬೇಕಾಗಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಅತಿಯಾದ ಮಾಲಿನ್ಯದಿಂದ ಹೃದಯಾಘಾತ ಆಗುತ್ತಿದೆ.  ಇದಕ್ಕೆ ಮಾನಸಿಕ ಒತ್ತಡ, ಬೊಜ್ಜುತನವೂ ಕಾರಣ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಪರಿಷತ್ ನಲ್ಲಿಂದು ಡಾ. ಧನಂಜಯ ಸರ್ಜಿ, ಪ್ರಶ್ನೆಗೆ ಉತ್ತರಿಸಿ, ೪೫ ವರ್ಷದೊಳಗಿನವರು ಹಠಾತ್ ಹೃದಾಯಾಘಾತದಿಂದ ಮೃತಪಡುತ್ತಿರುವುದು ಸರ್ಕಾರದ ಗಮನಕ್ಕಿದೆ. ಬಿಪಿ, ಶುಗರ್ ಇರುವವರಿಗೆ ಶಾಶ್ವತವಾಗಿ ಔಷಧ ನೀಡಬೇಕು. ಇದನ್ನ ನಿಯಂತ್ರಿಸಿದರೆ ಉಳಿದ ಖಾಯಿಲೆ ನಿಯಂತ್ರಣ ಆಗಲಿದೆ. ೮೬ ಆಸ್ಪತ್ರೆಗಳಲ್ಲಿ ಕ್ಯಾತ್ಲಾಬ್ ಇದ್ದು, ಟೆಲಿ ಇಸಿಜಿ ಇಡಿ ರಾಜ್ಯಕ್ಕೆ ವಿಸ್ತರಣೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

><><><><><><><

ವಿಧಾನಸಭೆಯಲ್ಲಿಂದು ಧರ್ಮಸ್ಥಳ ಪ್ರಕರಣ ಪ್ರತಿಧ್ವನಿಸಿತು. ಧರ್ಮಸ್ಥಳ ಪ್ರಕರಣದಲ್ಲಿ ಎಫ್‌ಎಸ್‌ಎಲ್ ವರದಿ ಬರುವ ತನಕ ಅಸ್ಥಿಪಂಜರ ಶೋಧ ಕಾರ್ಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ವಿಧಾನಸಭೆಯಲ್ಲಿ ಸ್ಪಷ್ಟಪಡಿಸಿದ್ದಾರೆ. ಶೋಧ ಮುಂದುವರಿಸುವ ಬಗ್ಗೆ ಎಸ್‌ಐಟಿ ಅಧಿಕಾರಿಗಳೇ ತೀರ್ಮಾನ ತೆಗೆದುಕೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ. ಇದಕ್ಕೂ ಮೊದಲು, ಮುಖ್ಯಮಂತ್ರಿ ಸಿದ್ದರಾಮಯ್ಯ ೨೪ ಕೊಲೆ ಮಾಡಿಸಿದ್ದಾರೆ ಎಂಬ ಮಹೇಶ್ ಶೆಟ್ಟಿ ತಿಮ್ಮರೋಡಿ ಹೇಳಿಕೆ ವಿರುದ್ಧ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ವಿಧಾನಸಭೆಯಲ್ಲಿಂದು ವಿಷಯ ಪ್ರಸ್ತಾಪಿಸಿದ ವಿಪಕ್ಷ ನಾಯಕ ಆರ್.ಅಶೋಕ, ಯಾರು ಧರ್ಮಸ್ಥಳದ ವಿರುದ್ಧ ನಿರಂತರವಾಗಿ ಅಪಚಾರ ಮಾಡುತ್ತಾ ಇದ್ದಾರೆಯೋ ಅದೇ ವ್ಯಕ್ತಿ, ಮುಖ್ಯಮಂತ್ರಿ ಬಗ್ಗೆಯೂ ಆರೋಪ ಮಾಡಿದ್ದಾರೆ ಎಂದು ಸದನದ ಗಮನ ಸೆಳೆದರು. ಈ ವೇಳೆ ಮಧ್ಯಪ್ರವೇಶಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸದನದಲ್ಲಿ ಆ ವ್ಯಕ್ತಿಯನ್ನು ಹಿರೋ ಮಾಡುವುದು ಬೇಡ. ಆತ ಮುಖ್ಯಮಂತ್ರಿ ಮಾತ್ರವಲ್ಲದೆ ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಗ್ಗೆಯೂ ಹೇಳಿದ್ದಾರೆ. ಗೃಹ ಇಲಾಖೆ ದಿಟ್ಟ ಕ್ರಮ ಕೈಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದರು.

><><><><><><

ಬಿ-ಖರಾಬು ಜಮೀನನ್ನು ಯಾರಿಗೂ ಮಂಜೂರು ಮಾಡಲು ಸಾಧ್ಯವಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ವಿಧಾನಸಭೆ ಪ್ರಶ್ನೋತ್ತರ ಕಲಾಪದ ವೇಳೆ ಶಿವಮೊಗ್ಗ ಗ್ರಾಮಾಂತರ ಶಾಸಕಿ ಶಾರದಾ ಪೂರ್ಯಾನಾಯ್ಕ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಜಂಗಲ್ ಅಥವಾ ಬಿ-ಖರಾಬು ಜಮೀನು ಮಂಜೂರಾತಿ ವಿಚಾರದಲ್ಲಿ ಯಾವುದೋ ಕಾಲದಲ್ಲಿ ತಪ್ಪಾಗಿದೆ. ಈ ಕುರಿತಂತೆ ಬೆಂಗಳೂರು ವಿಭಾಗ ಪ್ರದೇಶಿಕ ಆಯುಕ್ತರ ನೇತೃತ್ವದಲ್ಲಿ ಸಮಿತಿ ರಚಿಸಿ ಇದರ ನೈಜತೆ ಪರಿಶೀಲನೆಯ ಜವಾಬ್ದಾರಿ ನೀಡಲಾಗಿದೆ ಎಂದು ಹೇಳಿದ್ದಾರೆ. ಗೋಮಾಳ ಜಮೀನಿಗೆ ಸಂಬಂಧಿಸಿದ ತೀರ್ಮಾನವನ್ನು ಜಿಲ್ಲಾಧಿಕಾರಿಗಳಿಗೆ ನೀಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಬಗರ್ ಹುಕುಂ ಅರ್ಜಿಗಳ ವಿಚಾರದಲ್ಲಿ ಸರ್ಕಾರ ಅಥವಾ ಅಧಿಕಾರಿಗಳು ಕಾನೂನು ಮೀರಿ ನಡೆದಿಲ್ಲ. ಒಂದು ವೇಳೆ ರೈತರಿಗೆ ಅನ್ಯಾಯವಾಗಿದ್ದರೆ, ಸರ್ಕಾರದ ಗಮನಕ್ಕೆ ತಂದರೆ ಶೀಘ್ರದಲ್ಲೇ ಸಮಸ್ಯೆ ಬಗೆಹರಿಸುವುದಾಗಿ ಸದನಕ್ಕೆ ಭರವಸೆ ನೀಡಿದ್ದಾರೆ.

><><><><><><

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಹಾಗೂ ಮಹಿಳಾ ಸಬಲೀಕರಣದ ದಿಟ್ಟ ಯೋಜನೆಯಾದ ಶಕ್ತಿ ಯೋಜನೆ ಪ್ರತಿಷ್ಠಿತ ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್‌ನಲ್ಲಿ ದಾಖಲಾಗಿದೆ. ಅತಿ ಹೆಚ್ಚು ಮಹಿಳಾ ಪ್ರಯಾಣಿಕರು ಪ್ರಯಾಣಿಸಿರುವ ಅಂದರೆ ೫೦೦ ಕೋಟಿ ಮಹಿಳಾ ಪ್ರಯಾಣಿಕರ ಟಿಕೆಟ್ ಪ್ರಯಾಣವು ವಿಶ್ವ ದಾಖಲೆಯಲ್ಲಿ ಸ್ಥಾನ ಪಡೆದಿದೆ. ಈ ಚಾರಿತ್ರಿಕ ಸಾಧನೆಯು ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಆಡಳಿತ ಮಂಡಳಿ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ರಾಜ್ಯ ಸರ್ಕಾರ ಸಮರ್ಪಿಸಿದೆ.

**><><><><><><**

ಗೌರಿ-ಗಣೇಶ ಹಬ್ಬವನ್ನು ಶಾಂತಿ, ಸೌಹಾರ್ದವಾಗಿ ಆಚರಿಸಲು ಸಾರ್ವಜನಿಕರು ಸಹಕಾರ ನೀಡಬೇಕು. ಅರ್ಥಪೂರ್ಣ ಆಚರಣೆಗೆ ಪ್ರತಿಯೊಬ್ಬರೂ ನೆರವಾಗಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಕಳೆದ ವರ್ಷ ಗಣಪತಿ ವಿಸರ್ಜನೆ ವೇಳೆ ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಸಂಭವಿಸಿದ್ದ ಕೋಮು ಘರ್ಷಣೆ ಹಿನ್ನೆಲೆಯಲ್ಲಿ ಅಂತಹ ಘಟನೆ ಪುನರಾವರ್ತಿಸಬಾರದೆಂದು ಮಂಡ್ಯ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ಇಲಾಖೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಸಾಮರಸ್ಯ ಸಭೆ ಆಯೋಜಿಸಿತ್ತು. ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕುಮಾರ, ಈ ಬಾರಿ ಎಲ್ಲರೂ ಒಗ್ಗೂಡಿ ಗೌರಿ ಗಣೇಶ ಹಾಗೂ ಈದ್ ಮಿಲಾದ್ ಆಚರಿಸೋಣ ಎಂದು ಕರೆ ನೀಡಿದ್ದಾರೆ.

******ಧ್ವನಿ*** ಡಾ.ಕುಮಾರ, ಡಿಸಿ**

**><><><><><><**

ವಾಯಭಾರ ಕುಸಿತ ಹಿನ್ನೆಲೆಯಲ್ಲಿ ರಾಜ್ಯದ ಹಲವೆಡೆ ಧಾರಾಕಾರ ಮಳೆಯಾಗುತ್ತಿದೆ. ಹಾಸನ ಜಿಲ್ಲೆಯಾದ್ಯಂತ ಬೆಳಗ್ಗೆಯಿಂದಲೇ ನಿರಂತರವಾಗಿ ಮಳೆ ಸುರಿಯುತ್ತಿದೆ. ಸಕಲೇಶಪುರ ತಾಲೂಕಿನ ಶಿರಾಡಿ ಘಾಟ್‌ನಲ್ಲಿ ಭಾರಿ ಮಳೆಗೆ ರಾಷ್ಟ್ರೀಯ ಹೆದ್ದಾರಿ ೭೫ ರ ಮೇಲೆ ರಾತ್ರಿ ಗುಡ್ಡ ಕುಸಿದಿದ್ದು, ಮಣ್ಣನ್ನು ತೆರವುಗೊಳಿಸಲಾಗಿದೆ. ಇದೇ ವೇಳೆ ಹೇಮಾವತಿ ನದಿ ಪಾತ್ರದ ಜನರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಜಿಲ್ಲಾಡಳಿತ ಸೂಚನೆ ನೀಡಿದೆ. ಬಂಗಾಳಕೊಲ್ಲಿಯ ವಾಯುಭಾರ ಕುಸಿತದ ಪ್ರಭಾವ ಕರಾವಳಿ ಜಿಲ್ಲೆಗಳಿಗೂ ತಟ್ಟಿದೆ. ಕಳೆದ ಕೆಲವು ದಿನಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆಯಾಗುತ್ತಿದೆ. ಕಡಲು ಪ್ರಕ್ಷುಬ್ಧವಾಗಿರುವ ಹಿನ್ನೆಲೆಯಲ್ಲಿ ಮೀನುಗಾರರು ಮೀನುಗಾರಿಕೆಗೆ ತೆರಳದೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಡಳಿತ ಸೂಚನೆ ನೀಡಿದೆ. ಉಡುಪಿ, ಉತ್ತರ ಕನ್ನಡ

ಜಿಲ್ಲೆಯಲ್ಲೂ ಮಳೆಯಾಗುತ್ತಿದೆ. ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯ ಬಹುತೇಕ ಕಡ ಧಾರಾಕಾರ ಮಳೆಯಾಗುತ್ತಿದೆ. ಜಿಲ್ಲೆಯಲ್ಲಿ ನಾಳೆ ಬೆಳಗ್ಗಿನವರೆಗೂ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಹಿಡಕಲ್ ಜಲಾನಯನ ಪ್ರದೇಶದಲ್ಲಿ ಧಾರಾಕಾರ ಮಳೆ ಆಗುತ್ತಿರುವ ಹಿನ್ನಲೆಯಲ್ಲಿ ಬಾಗಲಕೋಟೆಯ ಹಿಡಕಲ್ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ಒಳಹರಿವು ಹರಿದು ಬರುತ್ತಿದೆ. ಜಲಾಶಯದ ಒಳಹರಿವು ಹೆಚ್ಚಾದಂತೆ ನೀರನ್ನು ನದಿ ಪಾತ್ರಕ್ಕೆ ಹರಿಬಿಡಲಾಗುತ್ತಿದೆ. ಆದ್ದರಿಂದ ಘಟಪ್ರಭಾ ನದಿ ತಟದ ಗ್ರಾಮಸ್ಥರು ತಮ್ಮ ಜಾನುವಾರುಗಳ ಸಮೇತ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಅಪರ ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಗದಗ ಜಿಲ್ಲೆಯಲ್ಲಿ ನಿರಂತರವಾಗಿ ಜಿಟಿ ಜಿಟಿ ಮಳೆಯಾಗುತ್ತಿದೆ. ಕಟಾವಿಗೆ ಬಂದಿದ್ದ ಹೆಸರು, ಅಲಸಂದಿ, ಈರುಳ್ಳಿ, ಶೇಂಗಾ, ಮುಸುಕಿನ ಜೋಳದ ಪೈರು ಜಲಾವೃತಗೊಂಡ ಪರಿಣಾಮವಾಗಿ ರೈತರು ಆತಂಕಗೊಂಡಿದ್ದಾರೆ.

><><><><><><><

ರಾಜ್ಯದಲ್ಲಿ ನೈಋತ್ಯ ಮುಂಗಾರು ಉತ್ತರ ಒಳನಾಡಿನಲ್ಲಿ ತೀವ್ರವಾಗಿದ್ದು, ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಸಕ್ರಿಯವಾಗಿತ್ತು. ರಾಜ್ಯದ ಬಹುತೇಕ ಕಡೆಗಳಲ್ಲಿ ಮಳೆಯಾಗಿದೆ. ಉತ್ತರ ಕನ್ನಡ ಜಿಲ್ಲೆಯ ಕ್ಯಾಸಲ್‌ರಾಕ್‌ನಲ್ಲಿ ೨೪ ಸೆಂಟಿ ಮೀಟರ್ ಮಳೆಯಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಯ ಕೆಲವೆಡೆ ನಿರಂತರ ಗಾಳಿಯೊಂದಿಗೆ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಬೆಳಗಾವಿ, ಬೀದರ್, ಕಲಬುರಗಿ ಮತ್ತು ವಿಜಯಪುರ, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಕರಾವಳಿ ಮತ್ತು ಘಟ್ಟ ಪ್ರದೇಶಗಳಲ್ಲಿ ಭೂಕುಸಿತ ಸಾಧ್ಯತೆ ಹೆಚ್ಚಾಗಿದೆ. ಬೆಂಗಳೂರಿನಲ್ಲೂ ಹಗುರದಿಂದ ಸಾಧಾರಣ ಮಳೆ ಸಂಭವ.

><><><><><><><

ನೀರಿನ ಮೌಲ್ಯ ಪ್ರತಿಯೊಬ್ಬರೂ ತಿಳಿಯಬೇಕು ಹಾಗೂ ಜೆಜೆಎಂ ಯೋಜನೆಯಡಿ ದಿನದ ೨೪ ಗಂಟೆ ನಿರಂತರ ನೀರು ಸರಬರಾಜು ಸುಸ್ಥಿರ ನಿರ್ವಹಣೆಗೆ, ಇಲಾಖೆಯೊಡನೆ ಗ್ರಾಮ ಪಂಚಾಯಿತಿ ಹಾಗೂ ಸಾರ್ವಜನಿಕರು ಕೈಜೋಡಿಸಬೇಕು ಎಂದು ವಿಜಯನಗರ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ನೋಂಗ್ಜಾಯ್ ಮೊಹಮ್ಮದ್ ಅಲಿ ಅಕ್ರಮ್ ಶಾ ತಿಳಿಸಿದ್ದಾರೆ.

ಕೊಟ್ಟೂರು ತಾಲ್ಲೂಕಿನ ಕಂದಗಲ್ಲು ಹಾಗೂ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಕಲ್ಲಹಳ್ಳಿ ಗ್ರಾಮಗಳಲ್ಲಿ ದಿನದ ೨೪ ಗಂಟೆ ನೀರು ಸರಬರಾಜು ಗ್ರಾಮಗಳ ಘೋಷಣೆ ಕಾರ್ಯಕ್ರಮದಲ್ಲಿ ಅವರು

ಮಾತನಾಡಿದರು, ಪ್ರತಿ ವ್ಯಕ್ತಿಗೆ ಒಂದು ದಿನಕ್ಕೆ ೫೫ ಲೀಟರ್ ನೀರನ್ನು ಒದಗಿಸುವ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

><><><><><><

ಯಾದಗಿರಿಯಲ್ಲಿ ಸಹಕಾರ ಸಂಘಗಳ ಸಿಬ್ಬಂದಿಗೆ ಸಮಗ್ರ ಪೋಷಕಾಂಶಗಳ ಜೊತೆ ಇನ್ನಷ್ಟು ಕೃಷಿಗೆ ಸಂಬಂಧಿಸಿದ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಉದ್ದೇಶವಿದೆ ಎಂದು ಯಾದಗಿರಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರತೇಂದ್ರನಾಥ್ ಸೂಗೂರ್ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಭೀಮರಾಯನಗುಡಿ ಕೃಷಿ ವಿದ್ಯಾಲಯದ ಸಭಾಂಗಣದಲ್ಲಿ ಸಹಕಾರ ಸಂಘಗಳಿಗೆ ಸಮಗ್ರ ಪೋಷಕಾಂಶಗಳ ನಿರ್ವಹಣೆ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸರ್ಕಾರದಿಂದ ನೇರವಾಗಿ ರಸಗೊಬ್ಬರಗಳನ್ನು ಗ್ರಾಮ ಮಟ್ಟದಲ್ಲಿನ ಪ್ರಾಥಮಿಕ ವ್ಯವಸಾಯ ಸೇವಾ ಸಹಕಾರ ಸಂಘಗಳ ಮೂಲಕ ರೈತರಿಗೆ ತಲುಪಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದ್ದಾರೆ.

><><><><><><

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಲಕ್ಷ್ಮಿದೇವಪುರ ಗ್ರಾಮದಲ್ಲಿ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ. ಗೋಪಿಕಾ, ಸಿ. ಮುತ್ತಗಿ ಮಾತನಾಡಿ, ತಾಯಿ ಹಾಲಿನಲ್ಲಿ ಸಾಕಷ್ಟು ಪೌಷ್ಟಿಕಾಂಶಗಳಿರುವುದರಿಂದ ಮಗುವಿನ ಆರೋಗ್ಯ ಉತ್ತಮವಾಗಿರುವುದಲ್ಲದೇ, ರೋಗ ನಿರೋಧಕ ಶಕ್ತಿಯು ಹೆಚ್ಚಲಿದೆ. ನವಜಾತ ಶಿಶುಗಳಿಗೆ ಮೊದಲ ಆರು ತಿಂಗಳವರೆಗೂ ಯಾವುದೇ ಇತರೆ ಆಹಾರವನ್ನು ನೀಡದೇ, ಬರೀ ತಾಯಿ ಎದೆಹಾಲು ಮಾತ್ರ ನೀಡಬೇಕು ಎಂದು ಸಲಹೆ ನೀಡಿದ್ದಾರೆ.

><><><><><><